## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್ .ರವಿ ರವರ ನಿಯಮ 72ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ :**

ದೇಶದೆಲ್ಲೆಡೆ ಬಯಲು ಶೌಚಮುಕ್ತ ಭಾರತ ಕಾರ್ಯಕ್ರಮ ಜಾರಿಯಲ್ಲಿದ್ದರೂ, ರಾಜ್ಯದ ಹಲವಾರು ಸರ್ಕಾರಿ ಶಾಲಾ-ಕಾಲೇಜುಗಳಲ್ಲಿ ಇಂದಿಗೂ ಶೌಚಾಲಯಗಳು ನಿರ್ಮಾಣವಾಗದಿರುವುದು ಮತ್ತು ಶೌಚಾಲಯಗಳು ಇರುವ ಕಡೆ ಅವುಗಳ ನಿರ್ವಹಣೆ ಮಾಡದಿರುವುದು ತುಂಬಾ ದುಃಖದ ವಿಷಯವಾಗಿದೆ. ಇದರಿಂದ ವಿದಾರ್ಥಿಗಳು ತುಂಬಾ ಮುಜುಗರ ಪಡುವಂತಹ ಸನ್ನಿವೇಶಗಳು ಸೃಷ್ಟಿಯಾಗಿ ವಿದ್ಯಾರ್ಥಿಗಳು ಶಾಲೆಯನ್ನೆ ತೊರೆಯುವಂತಹ ಪರಿಸ್ಥಿತಿ ನಿರ್ಮಾಣವಾಗಿರುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಕರ್ನಾಟಕದಲ್ಲಿ ಒಟ್ಟು ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ 4738 ಶಾಲೆಗಳಿದ್ದು ಈ ಎಲ್ಲಾ ಶಾಲೆಗಳಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳ ಶೌಚಾಲಯವಿರುತ್ತದೆ.

42567 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು ಈ ಪೈಕಿ 94 ಗಂಡು ಮಕ್ಕಳ ಮತ್ತು 89 ಹೆಣ್ಣುಮಕ್ಕಳ ಶೌಚಾಲಯಗಳನ್ನು ಹೊರತು ಪಡಿಸಿ ಉಳಿದ ಎಲ್ಲಾ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಇದೆ. (ಜಿಲ್ಲಾವಾರು ಪಟ್ಟಿಯನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.

2020-21ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ಮನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ, ಆಟದ ಮೈದಾನ, ಆವರಣ ಗೋಡೆ, ಅಡುಗೆ ಕೋಣೆ, ಮಳೆ ನೀರು ಕೊಯ್ಲು ಯೋಜನೆ, ಪೌಷ್ಟಿಕ ತೋಟ ನಿರ್ಮಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ. 2920.99 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ (ಜಿಲ್ಲಾವಾರು ಪಟ್ಟಿಯನ್ನು **ಅನುಬಂಧ-2**ರಲ್ಲಿ ಲಗತ್ತಿಸಿದೆ)

2021-22ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ ಹಾಗೂ ದುರಸ್ತಿಗೆ ರೂ.3500.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. (ಜಿಲ್ಲಾವಾರು ಪಟ್ಟಿಯನ್ನು **ಅನುಬಂಧ-3**ರಲ್ಲಿ ಲಗತ್ತಿಸಿದೆ)

2021-22ನೇ ಸಾಲಿನಲ್ಲಿ ಅಮೃತ ಶಾಲಾ ಸೌಲಭ್ಯಯೋಜನೆ ಅಡಿಯಲ್ಲಿ ಆಯ್ದ 750 ಸರ್ಕಾರಿ ಶಾಲೆಗಳಿಗೆ ಸುಸಜ್ಜಿತ ಕಟ್ಟಡ, ಪ್ರಯೋಗಾಲಯ, ಗ್ರಂಥಾಲಯ, ಶೌಚಾಲಯ ಇತ್ಯಾದಿ ಸಮಗ್ರ ಸೌಲಭ್ಯ ಒದಗಿಸಲು ತಲಾ ರೂ.10.00 ಲಕ್ಷಗಳಂತೆ ಒಟ್ಟು ರೂ.75.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ ಅವಶ್ಯಕತೆ ಇದ್ದ 670 ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಘಟಕಗಳನ್ನು ರೂ.1340.00 ಲಕ್ಷಗಳ ಅನುದಾನ ಬಳಸಿಕೊಂಡು 2018-19ನೇ ಸಾಲಿನಲ್ಲಿ ಸ್ವಚ್ಛಭಾರತ್ ಮಿಷನ್ (ಗ್ರಾ) ಯೋಜನೆಯಡಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಯೋಗದೊಂದಿಗೆ ನಿರ್ಮಾಣ ಮಾಡಲಾಗಿದೆ. (ಜಿಲ್ಲಾವಾರು ಪಟ್ಟಿಯನ್ನು ಅನುಬಂಧ-4ರಲ್ಲಿ ಲಗತ್ತಿಸಿದೆ)

ಮಾನ್ಯ ಕರ್ನಾಟಕ ಉಚ್ಛನ್ಯಾಯಾಲಯ ಆದೇಶದಂತೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರದಿಂದ 2020-21ನೇ ಸಾಲಿನಲ್ಲಿ 643 ಹೆಚ್ಚುವರಿ ಶೌಚಾಲಯಗಳಿಗೆ ಪ್ರತಿ ಶಾಲೆಗೆ ರೂ.2.00 ಲಕ್ಷದಂತೆ ಒಟ್ಟು ರೂ.1286.00 ಲಕ್ಷಗಳ ಅನುದಾನವನ್ನು ಸಮಗ್ರ

ಶಿಕ್ಷಣ ಕರ್ನಾಟಕದಿಂದ ಬಿಡುಗಡೆ ಮಡಲಾಗಿದೆ. (ಜಿಲ್ಲಾವಾರು ಪಟ್ಟಿಯನ್ನು ಅನುಬಂಧ-5 ರಲ್ಲಿ ಲಗತ್ತಿಸಿದೆ.)

2021-22ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಶೌಚಾಲಯ ನಿರ್ಮಾಣ ಮಾಡಲು ರೂ 15.00 ಕೋಟಿ ಅನುದಾನವನ್ನು ಜಿಲ್ಲಾವಾರು ಹಂಚಿಕೆ ಮಾಡಿ ಬಿಡುಗಡೆ ಮಾಡಲಾಗಿದ್ದು, ಸದರಿ ಇಲಾಖಾ ಅನುದಾನದೊಂದಿಗೆ ನರೇಗಾ ಅನುದಾನದ ಒಗ್ಗೂಡುವಿಕೆಯ ಮೂಲಕ ರಾಜ್ಯದಲ್ಲಿ ಶೌಚಾಲಯ ಕೊರತೆಯಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಶೌಚಾಲಯ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ.

**ರಾಜ್ಯ ಮುಂದುವರಿದ ಕಾರ್ಯಕ್ರಮಗಳಡಿಯಲ್ಲಿ 2021-22 ನೇ ಸಾಲಿನಲ್ಲಿ ಕುಡಿಯುವ ನೀರು ಶೌಚಾಲಯಗಳ ನಿರ್ವಹಣೆಗಾಗಿ ಪ್ರತಿ ಸರ್ಕಾರಿ ಶಾಲೆಗೆ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯೋಪಾಧ್ಯಾಯರ/ಎಸ್.ಡಿ.ಎಂ.ಸಿ ಜಂಟಿ ಖಾತೆಗಳಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 4650/- | 967.00 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 5400/- | 1214.00 |
| ಸರ್ಕಾರಿ ಪ್ರೌಢ ಶಾಲೆಗಳು | 6750/- | 319.00 |
| **ಒಟ್ಟು** | | **2500.00** |

ಮುಂದುವರೆದು ಶಾಲಾ ಕಟ್ಟಡಗಳ ದುರಸ್ಥಿಗಾಗಿ ರಾಜ್ಯ/ಜಿಲ್ಲಾ ವಿಪತ್ತು ನಿರ್ವಹಣಾ ನಿಧಿಯಡಿ ಹಾಗೂ ಇತರೆ ಲಭ್ಯವಿರುವ ಅನುದಾನ (ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಮತ್ತು ಡಿ.ಎಂ.ಎಫ್ ಯೋಜನೆಯಡಿ) ಬಿಡುಗಡೆ ಮಾಡಲು ಆಯಾ ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿ ಅನುದಾನವನ್ನು ಬಿಡುಗಡೆ ಮಾಡಿಸಿಕೊಂಡು ಶಾಲಾ ಕಟ್ಟಡಗಳ ದುರಸ್ಥಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ದಿನಾಂಕ:19.11.2021ರಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.

ಮಹಾತ್ಮಾ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು 14 ಮತ್ತು 15ನೇ ಹಣಕಾಸು ಆಯೋಗದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕ್ರಮವಹಿಸಲು ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 435 ಜಿಪಸ 2021, ದಿನಾಂಕ:08.11.2021ರ ಮೂಲಕ ಸುತ್ತೋಲೆ ಹೊರಡಿಸಲಾಗಿದೆ.

ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಲಭ್ಯವಿರುವ ಶೌಚಾಲಯಗಳಿಗೆ ಉತ್ತಮ ನಿರ್ವಹಣೆಗೆ ಕ್ರಮವಹಿಸಲು ಹಾಗೂ ಶೌಚಾಲಯಗಳ ಸ್ವಚ್ಛತೆ ಕಾಪಾಡಿಕೊಳ್ಳಲು ಶೌಚಾಲಯ ನಿರ್ವಹಣಾ

ವೆಚ್ಚವನ್ನು ಉತ್ತಮ ರೀತಿಯಲ್ಲಿ ಸದುಪಯೋಗ ಮಾಡಿಕೊಳ್ಳಲು ಸೂಚಿಸಿ ಇಲಾಖೆಯಿಂದ ದಿನಾಂಕ: 09-12-2019ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿದೆ.

**2022-23**ನೇ ಸಾಲಿನ ಆಯವ್ಯಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖಾ ವ್ಯಾಪ್ತಿಯ ಶಾಲಾ-ಕಾಲೇಜುಗಳಲ್ಲಿ ಶೌಚಾಲಯಗಳ ನಿರ್ಮಾಣ/ದುರಸ್ಥಿ/ನಿರ್ವಹಣೆಗಾಗಿ ರೂ.5000.00ಲಕ್ಷಗಳ ಅನುದಾನ ಒದಗಿಸಲಾಗಿದ್ದು, ಶೌಚಾಲಯ ನಿರ್ಮಾಣ ಮಾಡಲು ಅಗತ್ಯ ಕ್ರಮ ವಹಿಸಲಾಗುವುದು.

ಸದರಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಿಲ್ಲಾ ಹಂತದಲ್ಲಿ ಕ್ರಿಯಾ ಯೋಜನೆ ಅನುಮೋದನೆ ಪ್ರಕ್ರಿಯೆಯಲ್ಲಿದ್ದು, ಈ ನಿಟ್ಟಿನಲ್ಲಿ ಶೇಕಡ 100ರಷ್ಟು ಗುರಿ ಸಾಧಿಸಲು ಕಾರ್ಯೋನ್ಮುಖವಾಗಿದೆ.

ಪ್ರತಿ ವರ್ಷವು ರಾಜ್ಯ ಮುಂದುವರಿದ ಕಾರ್ಯಕ್ರಮಗಳಡಿಯಲ್ಲಿ ಕುಡಿಯುವ ನೀರು ಶೌಚಾಲಯಗಳ ನಿರ್ವಹಣೆಗಾಗಿ ಹಾಗೂ ಶೌಚಾಲಯಗಳ ನಿರ್ಮಾಣ ಮತ್ತು ದುರಸ್ಥಿಗಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಅನುದಾನದ ಲಭ್ಯತೆ ಆಧರಿಸಿ ಸರ್ಕಾರಿ ಶಾಲೆಗಳಿಗೆ ಶೌಚಾಲಯ ಅವಶ್ಯಕತೆಯಿರುವ ಕಡೆ ಆದ್ಯತೆಯ ಮೇರೆಗೆ ಹಂತ ಹಂತವಾಗಿ ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಿದೆ.

**ಸಂಖ್ಯೆ : ಇಪಿ 135 ಯೋಸಕ 2022**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು